# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩-೨೪ ದಿನಾಂಕ : ೧೦-೦೩-೨೦೨೩

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
..............................................ಬೆಂಗಳೂರು

**ಪ್ರಕಟಣೆಯ ಕೃಪೆಗಾಗಿ..**

## ಕನ್ನಡ ಸಾಹಿತ್ಯ ಪರೀಕ್ಷೆಗಳ ಫಲಿತಾಂಶ ಪ್ರಕಟ- ಶೇ. ೫೨ರಷ್ಟು ಅಭ್ಯರ್ಥಿಗಳು ಕನ್ನಡ ಸಾಹಿತ್ಯ ಪರೀಕ್ಷೆಯಲ್ಲಿ ಉತ್ತೀರ್ಣ

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್ತು ೨೦೨೨-೨೩ನೇ ಸಾಲಿನಲ್ಲಿ ನಡೆಸಿದ ಕನ್ನಡ ಪ್ರವೇಶ, ಕಾವ, ಜಾಣ ಮತ್ತು ರತ್ನ ಪರೀಕ್ಷೆಗಳ ಫಲಿತಾಂಶವನ್ನು ಪ್ರಕಟಿಸಲಾಗಿದೆ. ನಾಲ್ಕು ವಿಭಾಗದ ಪರೀಕ್ಷೆಗಾಗಿ ಒಟ್ಟು ೧೧೯೦ ಅಭ್ಯರ್ಥಿಗಳಲ್ಲಿ ೫೯೬ ಮಂದಿ ಅಭ್ಯರ್ಥಿಗಳು ತೇರ್ಗಡೆ ಹೊಂದಿರುತ್ತಾರೆ ಎಂದು ಕನ್ನಡ ಸಾಹಿತ್ಯ ಪರಿಷತ್ತು ಪ್ರಕಟಣೆಯಲ್ಲಿ ತಿಳಿಸಿದೆ,

ರಾಜ್ಯದ ಒಟ್ಟು ೧೮ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆದಿದ್ದು ಕನ್ನಡ ಪ್ರವೇಶ, ಕಾವ, ಜಾಣ ಮತ್ತು ರತ್ನ ವಿಭಾಗಕ್ಕಾಗಿ ೯೦೨ ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಈ ಪೈಕಿ ೫೯೬ ಪರೀಕ್ಷಾರ್ಥಿಗಳು ಉತ್ತೀರ್ಣರಾಗಿದ್ದು ಕನ್ನಡ ಪ್ರವೇಶ, ಕಾವ, ಜಾಣ ಮತ್ತು ರತ್ನ ವಿಭಾಗದಲ್ಲಿ ತಲಾ ಮೂವರು ಅಭ್ಯರ್ಥಿಗಳು ಮೊದಲ ಮೂರು ಶ್ರೇಣಿಯನ್ನು ಗಿಟ್ಟಿಸಿಕೊಂಡಿರುತ್ತಾರೆ.

ಕನ್ನಡ ಸಾಹಿತ್ಯ ಪರಿಷತ್ತು ೨೦೨೨-೨೩ನೇ ಸಾಲಿನಲ್ಲಿ ನಡೆಸಿದ ಕನ್ನಡ ಪ್ರವೇಶ, ಕಾವ, ಜಾಣ ಮತ್ತು ರತ್ನ ಪರೀಕ್ಷೆಗಳ ಫಲಿತಾಂಶದ ಪಟ್ಟಿಯನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಪ್ರಕಟಣಾ ಫಲಕದಲ್ಲಿ ಹಾಗೂ ಪರಿಷತ್ತಿನ ಅಂತರ್ಜಾಲದಲ್ಲಿ(ವೆಬ್‌ಸೈಟ್-www.kannadasahityaparishattu.in/app)ಪ್ರಕಟಿಸಲಾಗಿದೆ. (ಅಂತರ್ಜಾಲತಾಣ : www.kasapa.in)

ಅಂಕಪಟ್ಟಿ ಹಾಗೂ ಪ್ರಮಾಣಪತ್ರಗಳನ್ನು ಶೀಘ್ರದಲ್ಲಿಯೇ ಎಲ್ಲ ಅಭ್ಯರ್ಥಿಗಳಿಗೆ ಕನ್ನಡ ಸಾಹಿತ್ಯ ಪರಿಷತ್ತಿನ ಪರೀಕ್ಷಾ ವಿಭಾಗದಿಂದ ಅಭ್ಯರ್ಥಿಗಳಿಗೆ ಅಂಚೆಯ ಮೂಲಕ ಕಳುಹಿಸಿಕೊಡಲಾಗುವುದು. ಮರು ಮೌಲ್ಯಮಾಪನ ಹಾಗೂ ಮರು ಎಣಿಕೆಗೆ ಅಂಕಪಟ್ಟಿಗಳು ಕಳುಹಿಸಿದ ದಿನಾಂಕದಿಂದ ಒಂದು ತಿಂಗಳೊಳಗಾಗಿ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಗೌರವ ಕಾರ್ಯದರ್ಶಿ, ಕನ್ನಡ ಸಾಹಿತ್ಯ ಪರಿಷತ್ತು, ದೂರವಾಣಿ : ೦೮೦-೨೬೬೨೩೫೮೪, ೨೬೬೧೨೯೯೧, ೨೨೪೨೩೮೬೭ ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಲು ಕೋರಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕನ್ನಡ ಸಾಹಿತ್ಯ ಪರಿಷತ್ತು ನಡೆಸುವ ಕನ್ನಡ ಸಾಹಿತ್ಯ ಪರೀಕ್ಷೆಗಳಾದ ಕನ್ನಡ ಪ್ರವೇಶ, ಕಾವ, ಜಾಣ ಮತ್ತು ರತ್ನ ವಿಭಾದಲ್ಲಿ ಉತ್ತೀರ್ಣರಾಗಿರುವ ಎಲ್ಲಾ ಅಭ್ಯರ್ಥಿಗಳಿಗೆ ಕನ್ನಡ ಸಾಹಿತ್ಯ ಪರಿಷತ್ತು, ಸಮಸ್ತ ಕನ್ನಡಿಗರ ಪರವಾಗಿ ಅಭಿನಂದೆಗಳನ್ನು ಸಲ್ಲಿಸುತ್ತದೆ. ಕನ್ನಡ ಸಾಹಿತ್ಯ ಪರೀಕ್ಷೆಯ ಕುರಿತು ಸಂಪೂರ್ಣ ಮಾಹಿತಿ ಪಡೆದು ಪರೀಕ್ಷೆಯಲ್ಲಿ ಭಾಗವಹಿಸಿದ ಎಲ್ಲಾ ಅಭ್ಯರ್ಥಿಗಳಿಗೂ ಸಹ ಕನ್ನಡ ಸಾಹಿತ್ಯ ಪರಿಷತ್ತು ಹೆಮ್ಮೆಯಿಂದ ಗೌರವ ಸಲ್ಲಿಸುತ್ತದೆ. ಮುಂದಿನ ದಿನಗಳಲ್ಲಿ ಕನ್ನಡ ಭಾಷೆ, ನುಡಿ, ಸಂಸ್ಕೃತಿಗಳ ಅಧ್ಯಯನಕ್ಕಾಗಿ ಹೆಚ್ಚಿನ ಕನ್ನಡಾಸಕ್ತರು ಕನ್ನಡ ಸಾಹಿತ್ಯ ಪರೀಕ್ಷೆಯ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು ಕರೆ ನೀಡಿದ್ದಾರೆ.

ಶ್ರೀನಾಥ್ ಜೆ.
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು
ಬೆಂಗಳೂರು